ಕಾರ್ಖಾನೆಗಳಿಗೆ ಸಂಬಂಧಪಟ್ಟಂತೆ ಬಹುತೇಕ ವಿಷಯಗಳು ಸಕ್ಕರೆ ನಿರ್ದೇಶನಾಲಯ, ರಾಜ್ಯ ಸರ್ಕಾರ ಮತ್ತು ಬ್ಯಾಂಕುಗಳು ಮುಂತಾದ ವಿವಿಧ ಕಛೇರಿ ಮತ್ತು ಸಂಸ್ಥೆಗಳೊಂದಿಗೆ ಬೆಂಗಳೂರಿನಲ್ಲಿಯೇ ಬಹಳಷ್ಟು ವ್ಯವಹರಿಸಬೇಕಾಗಿರುವುದರಿಂದ ಸಕ್ಕರೆ ನಿರ್ದೇಶನಾಲಯವನ್ನು ಬೆಂಗಳೂರಿನಲ್ಲಿಯೇ ಉಳಿಸಿಕೊಳ್ಳುವಂತೆ ಮಾನ್ಯ ಮುಖ್ಯಮಂತ್ರಿಗಳಿಗೆ ಮನವಿ ಮಾಡಿಕೊಂಡಿರುತ್ತಾರೆ.

ಈ ಮೇಲ್ಕಂಡ ಕಾರಣಗಳಿಂದ ಸಕ್ಕರೆ ನಿರ್ದೇಶನಾಲಯವು ಇದುವರೆಗೂ ಬೆಳಗಾಂಗೆ ಸ್ಥಳಾಂತರಗೊಂಡಿರುವುದಿಲ್ಲ.

ಆ) ಸಕ್ಕರೆ ನಿರ್ದೇಶನಾಲಯವನ್ನು ಬೆಂಗಳೂರಿನಲ್ಲಿಯೇ ಉಳಿಸಿಕೊಂಡು, ಬೆಳಗಾಂ, ಗುಲ್ಬರ್ಗಾ, ಮೈಸೂರು ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಒಂದೊಂದು ಪ್ರಾದೇಶಿಕ ಕಛೇರಿಯನ್ನು ಸ್ಥಾಪಿಸಿ, ಸಕ್ಕರೆ ನಿರ್ದೇಶನಾಲಯದ ಸಿಬ್ಬಂದಿಯನ್ನು ಬಲಪಡಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ಹುಲ್‌ಸೂರು ಕ್ಷೇತ್ರದ ವ್ಯಾಪ್ತಿಯಲ್ಲಿರುವ ಘೋಡವಾಡಿಯನ್ನು ಪ್ರವಾಸಿ ತಾಣವನ್ನಾಗಿ ಅಭಿವೃದ್ಧಿಪಡಿಸುವುದು.

2939(3770)

ಶ್ರೀ ರಾಜೇಂದ್ರ ವರ್ಮ(ಹುಲ್‌ಸೂರ್): ಮಾನ್ಯ ಪ್ರವಾಸೋದ್ಯಮ ಮತ್ತು ಹಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಲಸೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಘೋಡವಾಡಿಯಲ್ಲಿರುವ ಇಸ್ಮಾಯಿಲ್ ಖಾದ್ರಿ ದರ್ಗಾಕ್ಕೆ ಕರ್ನಾಟಕದ ನೆರೆಯ ರಾಜ್ಯವಾದ ಮಹಾರಾಷ್ಟ್ರ, ಆಂಧ್ರ ದೇಶ ಹಾಗೂ ದೇಶದ ವಿವಿಧ ರಾಜ್ಯಗಳಿಂದ ಪ್ರತಿದಿನ ಸಾವಿರಾರು ಸಂಖ್ಯೆಯಲ್ಲಿ ಭಕ್ತಾದಿಗಳು ಮತ್ತು ಪ್ರವಾಸಿಗರು ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಸ್ಥಳವನ್ನು ಪ್ರವಾಸಿ ತಾಣವೆಂದು ಘೋಷಣೆ ಮಾಡಿ ಅಭಿವೃದ್ಧಿಪಡಿಸುವುದಾಗಿ ಪ್ರವಾಸೋದ್ಯಮ ಸಚಿವರು ಕಳೆದ ವರ್ಷ ವಿಧಾನಸಭೆಯ ಅಧಿವೇಶನದಲ್ಲಿ ಪ್ರಕಟಿಸಿರುವುದು ನಿಜವೇ?

ಇ) ಈ ಸ್ಥಳವನ್ನು ಪ್ರವಾಸಿ ತಾಣವೆಂದು ಗುರುತಿಸಿ ಅಭಿವೃದ್ಧಿಪಡಿಸಲು ಸರ್ಕಾರ ಕ್ರಮಗಳನ್ನು ಕೈಗೊಳ್ಳಲಾಗಿದೆಯೇ? ಹಾಗಿಲ್ಲದಿದ್ದಲ್ಲಿ ಅದಕ್ಕೆ ಕಾರಣಗಳೇನು?

ಈ) ಪ್ರತಿದಿನ ಈ ಪವಿತ್ರ ಯಾತ್ರಾ ಸ್ಥಳಕ್ಕೆ ಸಾವಿರಾರು ಭಕ್ತಾದಿಗಳು ದೇಶದ ಎಲ್ಲೆಡೆಗಳಿಂದ ಬರುತ್ತಿರುವುದರಿಂದ ಇವರುಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಬಗ್ಗೆ ಹಾಗೂ ಈ ಸ್ಥಳವನ್ನು ಪ್ರವಾಸಿ ತಾಣವೆಂದು ಗುರುತಿಸಿ ಅಭಿವೃದ್ಧಿಪಡಿಸುವ ಬಗ್ಗೆ ಸರ್ಕಾರ ಆಗತ್ಯ ಕ್ರಮಗಳನ್ನು ಕೈಗೊಳ್ಳುವುದೇ?

ಶ್ರೀ ಆರ್.ರೋಷನ್ ಬೇಗ್ (ಪ್ರವಾಸೋದ್ಯಮ ಮತ್ತು ಹಜ್ ಸಚಿವರು):

ಅ) ಹೌದು.

ಆ) ಹೌದು.

ಇ) ಪ್ರವಾಸೋದ್ಯಮ ನೀತಿಯಲ್ಲಿ ಈ ಸ್ಥಳವನ್ನು ಪ್ರವಾಸಿ ತಾಣವೆಂದು ಗುರುತಿಸಿರುವುದಿಲ್ಲ. ಆದರೂ ಸಾವಿರಾರು ಭಕ್ತಾದಿಗಳು ಭೇಟಿ ಕೊಡುವ ಹಿನ್ನೆಲೆಯಲ್ಲಿ ಇಲ್ಲಿ ಯಾತ್ರಿ ನಿವಾಸ ಯೋಜನೆಗೆ ಕೇಂದ್ರದ ನೆರವನ್ನು ಕೋರಿ ಆದ್ಯತಾಪಟ್ಟಿಯಲ್ಲಿ ಸೇರಿಸಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.

ಈ) ಮೇಲೆ ತಿಳಿಸಿದಂತೆ ಯಾತ್ರಿ ನಿವಾಸದ ನಿರ್ಮಾಣದ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರವು ತನ್ನ 2001-02ನೇ ಸಾಲಿನ ಆದ್ಯತಾ ಪಟ್ಟಿಯಲ್ಲಿ ಸೇರಿಸುವಂತೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. ಈ ಯೋಜನೆಗೆ ಕೇಂದ್ರ ಸರ್ಕಾರದ ಮಂಜೂರಾತಿ ದೊರೆತ ನಂತರ ಅನುಷ್ಠಾನಗೊಳಿಸಲು ಕ್ರಮ ತೆಗೆದುಕೊಳ್ಳಲಾಗುವುದು.

ಹುಲ್‌ಸೂರು ಕ್ಷೇತ್ರದ ವ್ಯಾಪ್ತಿಯಲ್ಲಿರುವ ಹಳ್ಳಿಖೇಡ್(ಬಿ) ಗ್ರಾಮದಲ್ಲಿ ಸ್ಟೇಡಿಯಂ ನಿರ್ಮಿಸುವುದು.

2940(3771)

ಶ್ರೀ ರಾಜೇಂದ್ರ ವರ್ಮ(ಹುಲ್‌ಸೂರ್): ಮಾನ್ಯ ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯಲ್ಲಿ ಯಾವ ಯಾವ ಸ್ಥಳಗಳಲ್ಲಿ ಸ್ಟೇಡಿಯಂಗಳನ್ನು ನಿರ್ಮಿಸಲಾಗಿದೆ ಹಾಗೂ ಕಳೆದ 3 ವರ್ಷಗಳಲ್ಲಿ ಜಿಲ್ಲೆಯ ಯಾವ ಯಾವ ಸ್ಥಳಗಳಿಗೆ ಸ್ಟೇಡಿಯಂಗಳನ್ನು ಮಂಜೂರು ಮಾಡಲಾಗಿದೆ ಹಾಗೂ ಇದಕ್ಕಾಗಿ ಇಲ್ಲಿಯವರೆಗೆ ವೆಚ್ಚ ಮಾಡಲಾಗಿರುವ ಹಣವೆಷ್ಟು? (ವರ್ಷವಾರು ವಿವರಗಳನ್ನು ಒದಗಿಸುವುದು)